# ಕರ್ನಾಟಕ ಸರ್ಕಾರ
## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.
## ಸಿ.ಸಿ.ನಂ.1251/2021

ಪಿ.ಡಬ್ಲ್ಯೂ: 4

ಸಿ.ಡಬ್ಲ್ಯೂ: 4

ಸಾಕ್ಷಿದಾರರ ಹೆಸರು : ಕುಮಾರಪ್ಪ

ತಂದೆಯ ಹೆಸರು: ः ನಂಜಪ್ಪ

ವಯಸ್ಸು : **50 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಗದ್ದೆಕೆರೆ ಲಕ್ಕವಳ್ಳಿ

**ದಿನಾಂಕ:14-10-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 4-5 ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಗ್ರಾಮದಲ್ಲಿ ಪೊಲೀಸರು ಕಳ್ಳತನದ ವಿಚಾರವಾಗಿ ಮಹಜರ್ ಮಾಡಿದ್ದು ಅದಕ್ಕೆ ನಾನು ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ವಸ್ತುಗಳನ್ನು ತೋರಿಸಿರುತ್ತಾರೆ, ಆದರೆ ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಛಾಯಚಿತ್ರಗಳ ದೃಢೀಕೃತ ನಕಲುಗಳನ್ನು ತೋರಿಸಲಾಗಿದ್ದು, ಅವುಗಳನ್ನು ಕ್ರಮವಾಗಿ ನಿಪಿ-4 ರಿಂದ 6 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: 17-03-2021 ರಂದು ಬೆಳಿಗ್ಗೆ 10-30 ರಿಂದ 10-45 ಸಮಯದಲ್ಲಿ ಕರಕುಚ್ಚಿ ಎ ಕಾಲೋನಿಯ ಬಾಡಿಗೆ ಮನೆಯಲ್ಲಿ ವಾಸವಾಗಿರುವ ತ್ರಿವೇಣಮ್ಮನವರ ಮನೆಯ ಮುಂದೆ ಪೊಲೀಸರು ಕಳ್ಳತನದ ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ ಹಾಕಿರುತ್ತೀರಾ ಎಂದರೆ ಸಾಕ್ಷಿ ಸಹಿ ಹಾಕಿರುತ್ತೇನೆ, ಆದರೆ ಯಾವುದೇ ವಿಚಾರ ತಿಳಿದಿರುವುದಿಲ್ಲ ಎಂದು ನುಡಿದಿರುತ್ತಾರೆ. ಆ ಸಮಯದಲ್ಲಿ ನಿಮ್ಮ ಸಮಕ್ಷಮ ಬೆಳ್ಳಿಯ ವಸ್ತುಗಳು ನಗದು ಹಣ ಹಾಗೂ ಕೃತ್ಯಕ್ಕೆ ಬಳಸಿದ

ಒಂದು ಸ್ಪಾನರ್, ಒಂದು ಸ್ಕ್ರೂಡ್ರೈವರ್ ಆ್ಯಕ್ಸಲ್ ಬ್ಲೇಡ್ ನ್ನು ಪೊಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ನಮಗೆ ತೋರಿಸಿ ತೆಗೆದುಕೊಂಡಿರುತ್ತಾರೆಂದು ನುಡಿದಿರುತ್ತಾರೆ.

ಸಾಕ್ಷಿಯು ನ್ಯಾಯಾಲಯದ ಮುಂದಿರುವ ಸ್ಪಾನರ್ ಸ್ಕ್ರೂಡ್ರೈವರ್ ಮತ್ತು ಆ್ಯಕ್ಸಲ್ ಬ್ಲೇಡ್ ನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ಎಂ ಒ-1 ರಿಂದ 3 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.</u>**

ಪೊಲೀಸರು ತೋರಿಸಿರುವ ವಸ್ತುಗಳು ಇದೇ ವಸ್ತುಗಳು ಎಂದು ಹೇಳಲು ಈಗ ಆಗುವುದಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಯಾವುದೇ ವಿಚಾರ ನನಗೆ ತಿಳಿದಿರುವುದಿಲ್ಲ. ಛಾಯಚಿತ್ರಗಳಲ್ಲಿ ಪೊಲೀಸರು ಕೋರಿಕೆಯ ಮೇರೆಗೆ ನಿಂತಿರುತ್ತೇನೆ.

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**